RNU AIR DHARWAD

# OCTOBER 25, 2024

## AKASHAVANI - DHARWAD

## PRADESH SAMACHARA (KANNADA) 07.05 A.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ಹರ್ಷವರ್ಧನ ಶೀಲವಂತ

<><><>

ಮುಖ್ಯಾಂಶಗಳು:

<><><>

- ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಲು ಸಾಧ್ಯವಾಗದ ಬಡವರಿಗೆ, ಆರೋಗ್ಯ ಸೇವೆ ಮನೆ ಬಾಗಿಲಿಗೆ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಬೆಂಗಳೂರಿನ ಪ್ರತಿಷ್ಠಿತ ಮಾಲ್‌ಗಳಲ್ಲಿ, ಆಹಾರ ಪದಾರ್ಥ ಕಲಬೆರಕೆ ಪತ್ತೆಗೆ, ಪರೀಕ್ಷಾ ಕೇಂದ್ರ ಸ್ಥಾಪನೆ – ಆಯುಕ್ತ ಕೆ. ಶ್ರೀನಿವಾಸ.
- ಉಪ ರಾಷ್ಟ್ರಪತಿ ಜಗದೀಪ್ ಧನಕರ್, ಇಂದು ಮತ್ತು ನಾಳೆ ರಾಜ್ಯಕ್ಕೆ ಭೇಟಿ; ಹಲವು ಕಾರ್ಯಕ್ರಮಗಳಲ್ಲಿ ಭಾಗಿ.
- ಇಂದಿನಿಂದ ನವೆಂಬರ್ 2ರ ವರೆಗೆ, ಭಕ್ತರಿಗೆ ಹಾಸನಾಂಬೆ ದರ್ಶನ ಭಾಗ್ಯ.

<><><>

ಈಗ ವಾರ್ತೆಗಳ ವಿವರ

<><><>

ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಲು ಸಾಧ್ಯವಾಗದ ಬಡವರಿಗೂ, ತಪಾಸಣೆ ಮತ್ತು ಚಿಕಿತ್ಸೆ ಒದಗಿಸಲು ಸಾಧ್ಯವಾಗಲಿ ಎಂದು, ಮನೆ ಬಾಗಿಲಿಗೆ ಆರೋಗ್ಯ ಕಾರ್ಯಕ್ರಮ ಆರಂಭಿಸಿದ್ದಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿಸಿದ್ದ, "ಗೃಹ ಆರೋಗ್ಯ – ಆರೋಗ್ಯ ಸೇವೆ ಮನೆ ಬಾಗಿಲಿಗೆ", ನೂತನ ಜನಾರೋಗ್ಯ ಕಾರ್ಯಕ್ರಮ ಉದ್ಘಾಟಿಸಿ, ಅವರು ಮಾತನಾಡಿದರು. ಬಹಳ ಜನರಿಗೆ ವೈದ್ಯರ ತಪಾಸಣೆ ವೆಚ್ಚ ಭರಿಸಲೂ ಸಾಧ್ಯವಾಗುವುದಿಲ್ಲ. ಅಂಥವರಿಗೂ ಆರೋಗ್ಯದ ಹಕ್ಕಿದೆ. ತಪಾಸಣೆಯಿಂದ ಸಾಂಕ್ರಾಮಿಕ ರೋಗಗಳು, ಸಾಂಕ್ರಾಮಿಕವಲ್ಲದ ರೋಗಗಳೂ ಪತ್ತೆಯಾಗುತ್ತವೆ, ಎಂದರು.

<><><>

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ್ ಮಾತನಾಡಿ, ಕೋಲಾರದಲ್ಲಿ ಪ್ರಾಯೋಗಿಕವಾಗಿ ಗೃಹ ಆರೋಗ್ಯ ಸೇವೆ ಯೋಜನೆಗೆ ಚಾಲನೆ ನೀಡಲಾಗಿದೆ. ಜನೆವರಿ ತಿಂಗಳಿನಿಂದ, ಈ ಸೇವೆಯನ್ನು ರಾಜ್ಯಾದ್ಯಂತ ವಿಸ್ತರಿಸಲಾಗುವುದು, ಎಂದರು.

<><><>

ರಾಜ್ಯ ಸರ್ಕಾರ, ಗ್ರಾಮ ಮಟ್ಟದಲ್ಲಿ ಆರೋಗ್ಯ ಸೌಲಭ್ಯವನ್ನು ಒದಗಿಸಲು, ಕ್ರಮ ಕೈಗೊಂಡಿದೆ ಎಂದು, ಮೂಡಿಗೆರೆ ಶಾಸಕಿ, ನಯನಾ ಮೋಟಮ್ಮ ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆ, ಆವತಿ ಹೋಬಳಿಯ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಜೇನು ಗದ್ದೆ ಗ್ರಾಮದ, ಆಯುಷ್ಮಾನ್ ಆರೋಗ್ಯ ಉಪ ಕೇಂದ್ರಗಳನ್ನು ಉದ್ಘಾಟಿಸಿ, ಅವರು ಮಾತನಾಡಿದರು. ಮಲೆನಾಡಿನ ಭಾಗದಲ್ಲಿ ಹಲವೆಡೆ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಅಗತ್ಯವಿದೆ. ಈ ಭಾಗದ ಕೃಷಿಕರಿಗೆ, ಕಾರ್ಮಿಕರಿಗೆ ತುಂಬ ಅನುಕೂಲವಾಗಲಿದೆ ಎಂದರು.

<><><>

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ ಅನುಮೋದಿಸಿದ, ಮ್ಯಾಜಿಕ್ ಬಾಕ್ಸ್ ಮತ್ತು ರ್‍ಯಾಪಿಡ್ ಟೆಸ್ಟ್ ಕಿಟ್‌ಗಳನ್ನು ಬಳಸಿ, ಸುಲಭವಾದ ಕೆಲವು ತ್ವರಿತ ಪರೀಕ್ಷೆಗಳನ್ನು ಮಾಡಬಹುದು ಎಂದು ಇಲಾಖೆಯ ಆಯುಕ್ತ ಕೆ. ಶ್ರೀನಿವಾಸ, ತಿಳಿಸಿದ್ದಾರೆ. ಬೆಂಗಳೂರಿನ ಕೆಲವು ಪ್ರತಿಷ್ಠಿತ ಮಾಲ್‌ಗಳಲ್ಲಿ, ಪ್ರಾಯೋಗಿಕ ತ್ವರಿತ ಪರೀಕ್ಷೆ ಪ್ರಾರಂಭಿಸಲಾಗುತ್ತಿದ್ದು, ಯಲಹಂಕ ಬಳ್ಳಾರಿ ರಸ್ತೆಯಲ್ಲಿರುವ, ಫೀನಿಕ್ಸ್ ಮಾಲ್ ಆಫ್ ಏಷಿಯಾದಲ್ಲಿ, ಇಂದು ಸಂಜೆ 4 ಗಂಟೆಗೆ, ಆರೋಗ್ಯ ಖಾತೆ ಸಚಿವ ದಿನೇಶ ಗುಂಡೂರಾವ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

<><><>

ದಕ್ಷಿಣಕನ್ನಡ ಮತ್ತು ಉಡುಪಿ ಜಿಲ್ಲೆಗಳ, ಸ್ಥಳೀಯ ಸಂಸ್ಥೆಗಳಿಂದ ವಿಧಾನ ಪರಿಷತ್‌ಗೆ ನಡೆದ ಉಪ ಚುನಾವಣೆಯಲ್ಲಿ, ಬಿಜೆಪಿ ಅಭ್ಯರ್ಥಿ ಕಿಶೋರಕುಮಾರ ಗೆಲುವು ಸಾಧಿಸಿದ್ದಾರೆ. ಅವರು, ಸಾವಿರದ 600 ಕ್ಕೂ ಅಧಿಕ ಮತಗಳ ಅಂತರದಿಂದ, ಕಾಂಗ್ರೆಸ್ ಅಭ್ಯರ್ಥಿ ರಾಜು ಪೂಜಾರಿ ವಿರುದ್ಧ ಗೆಲುವು ಸಾಧಿಸಿದ್ದಾರೆ.

<><><>

ವಿಧಾನಸಭಾ ಉಪ ಚುನಾವಣೆಯ, ಚನ್ನಪಟ್ಟಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ನಾಮಪತ್ರ ಸಲ್ಲಿಸಿದ್ದಾರೆ. ಇಂದು ಎನ್.ಡಿ.ಎ. ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ನಾಮಪತ್ರ ಸಲ್ಲಿಸುವರು.

<><><>

ಸಂಡೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಸಂಸದ ತುಕರಾಂ ಅವರ ಪತ್ನಿ ಅನ್ನಪೂರ್ಣಾ ನಾಮಪತ್ರ ಸಲ್ಲಿಸಿದ್ದಾರೆ.

<><><>

ಹಾವೇರಿ ಜಿಲ್ಲೆ ಶಿಗ್ಗಾಂವ ಕ್ಷೇತ್ರದ ಉಪ ಚುನಾವಣೆಗೆ, ಬಿಜೆಪಿ ಅಭ್ಯರ್ಥಿಯಾಗಿ, ಭರತ್ ಬಸವರಾಜ ಬೊಮ್ಮಾಯಿ ನಾಮಪತ್ರ ಸಲ್ಲಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿಯಾಗಿ ಯಾಸಿರ್ ಅಹ್ಮದ್‌ಖಾನ್ ಪಠಾಣ್ ಇಂದು ನಾಮಪತ್ರ ಸಲ್ಲಿಸುವರು.

<><><>

ಚನ್ನಪಟ್ಟಣ, ಸಂಡೂರು ಹಾಗೂ ಶಿಗ್ಗಾಂವ ವಿಧಾನಸಭಾ ಕ್ಷೇತ್ರಗಳಿಗೆ, ನವೆಂಬರ್ 13ರಂದು ನಡೆಯಲಿರುವ ಉಪ ಚುನಾವಣೆಗೆ ನಾಮಪತ್ರ ಸಲ್ಲಿಸಲು, ಇಂದು ಕೊನೆಯ ದಿನವಾಗಿದೆ.

<><><>

ಬಳ್ಳಾರಿ ಜಿಲ್ಲೆ ಸಂಡೂರಿನಲ್ಲಿ, ಮಾದರಿ ನೀತಿ ಸಂಹಿತೆ ಉಲ್ಲಂಘಿಸಿದ ಹಿನ್ನೆಲೆ, 8 ಪ್ರಕರಣಗಳು ದಾಖಲಾಗಿವೆ ಎಂದು, ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತಕುಮಾರ ಮಿಶ್ರಾ ತಿಳಿಸಿದ್ದಾರೆ.

<><><>

ಯಾದಗಿರಿ ಜಿಲ್ಲೆ, ಶಹಾಪುರ ತಾಲೂಕಿನ ಕೊಳ್ಳೂರು ಎಂ., ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದ, ಸಂಜೀವಿನಿ ಯೋಜನೆಯಡಿ, ಕಾಳಿಕಾ ದೇವಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರು, ಸ್ವಚ್ಛತಾ ವಾಹಿನಿ ವಾಹನದ ಮೂಲಕ, ಗ್ರಾಮದ ಬೀದಿಗಳಿಂದ ತ್ಯಾಜ್ಯವನ್ನು ಸಂಗ್ರಹಿಸಿ, ವಿಲೇವಾರಿ ಮಾಡುತ್ತಿದ್ದಾರೆ. ಶಹಾಪುರ ತಾಲೂಕು ಪಂಚಾಯ್ತಿ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ ಬಿರಾದಾರ, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

ಸೋಮಶೇಖರ್ ಬಿರಾದಾರ್ ಧ್ವನಿ 45 ಸೆಕೆಂದುಗಳು

<><><>

ಈಗ ಪ್ರಕಟಣೆ..
ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು

<><><>

(35 ಸೆಕೆಂದುಗಳು)

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಉಪ ರಾಷ್ಟ್ರಪತಿ ಜಗದೀಪ್ ಧನಕರ್, ಇಂದು ಮತ್ತು ನಾಳೆ, ರಾಜ್ಯಕ್ಕೆ ಭೇಟಿ ನೀಡಲಿದ್ದಾರೆ. ಇಂದು, ಮಂಡ್ಯ ಜಿಲ್ಲೆಯ ಬಿ.ಜಿ.ನಗರದ ಆದಿಚುಂಚನಗಿರಿ ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ನಾಳೆ, ಬೆಂಗಳೂರಿನಲ್ಲಿ ಆಯೋಜಿತ 'ನಮಃ ಶಿವಾಯ' ಪಾರಾಯಣ ಕಾರ್ಯಕ್ರಮದಲ್ಲಿ, ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಉಪ ರಾಷ್ಟ್ರಪತಿಯವರು, ರಾಜಭವನಕ್ಕೂ ಭೇಟಿ ನೀಡಲಿದ್ದಾರೆ.

<><><>

ಸಂಸ್ಕೃತ ಭಾ ೆ ನಮ್ಮ ನೆಲದ ಮೂಲ ಭಾ ೆಯಾಗಿದೆ. ಸಂಸ್ಕೃತದ ಮಹತ್ವವನ್ನು ಅರಿತು, ಪುರಾತನ ಭಾ ೆ ಮತ್ತು ಸಂಸ್ಕೃತಿಯನ್ನು, ಉಳಿಸಿ ಬೆಳೆಸುವ ಕೆಲಸವಾಗಬೇಕು ಎಂದು, ಯೋಗ ಗುರು ಬಾಬಾ ರಾಮದೇವ್ ಹೇಳಿದ್ದಾರೆ. ಉಡುಪಿಯ ಶ್ರೀ ಕೃ ್ಣ ಮಠದಲ್ಲಿ ಆಯೋಜಿಸಿರುವ, ಮೂರು ದಿನಗಳ ಅಖಿಲ ಭಾರತೀಯ ಪ್ರಾಚ್ಯವಿದ್ಯಾ ಸಮ್ಮೇಳನವನ್ನು, ಉದ್ಘಾಟಿಸಿ ಅವರು ಮಾತನಾಡಿದರು. ಪುತ್ತಿಗೆ ಮಠದ ಸುಗುಣೇಂದ್ರ ತೀರ್ಥ ಸ್ವಾಮೀಜಿ ಮಾತನಾಡಿ, ಉಡುಪಿ, ದಕ್ಷಿಣ ಭಾರತದ ಆಧ್ಯಾತ್ಮಿಕ ರಾಜಧಾನಿ ಎಂಬ ಹೆಗ್ಗಳಿಕೆ ಪಡೆದಿದೆ. ಶ್ರೇ ್ಠ ಭಾ ೆಯಾದ ಸಂಸ್ಕೃತ, ದೇಶದ ಎಲ್ಲ ಭಾ ೆಗಳ ತಾಯಿ ಎಂದರು.

<><><>

ವರ್ಷಕ್ಕೊಮ್ಮೆ ದರ್ಶನ ಭಾಗ್ಯ ಕರುಣಿಸುವ, ಹಾಸನದ ಅಧಿದೇವತೆ ಹಾಸನಾಂಬೆಯ ಗರ್ಭಗುಡಿಯ ಬಾಗಿಲನ್ನು, ಶಾಸ್ತ್ರೋಕ್ತವಾಗಿ ತೆರೆಯಲಾಗಿದೆ. ಅರಸು ವಂಶಸ್ಥರು, ಬಾಳೆಗಿಡ ಕಡಿದ ನಂತರ, ಗರ್ಭಗುಡಿ ಬಾಗಿಲು ತೆರೆಯಲಾಯಿತು. ಇಂದಿನಿಂದ ನವೆಂಬರ್ 2ರ ವರೆಗೆ ಭಕ್ತರಿಗೆ ಹಾಸನಾಂಬೆ ದರ್ಶನ ದೊರೆಯಲಿದೆ. ನವೆಂಬರ್ 3ರ ವರೆಗೆ ಜಾತ್ರೆ ನಡೆಯಲಿದೆ.

<><><>

ಮೇವು ಚಟುವಟಿಕೆಗಳ ವಸ್ತು ಪ್ರದರ್ಶನ, ತಜ್ಞರೊಂದಿಗೆ ಸಂವಾದದ, 'ಮೇವು ಮೇಳ', ಇಂದು ಹೆಬ್ಬಾಳದ ಪಶು ವೈದ್ಯಕೀಯ ಮಹಾವಿದ್ಯಾಲಯದ, ಬಾಲಕರ ವಸತಿ ಗೃಹದ ಮೈದಾನದಲ್ಲಿ ಆಯೋಜಿತವಾಗಿದೆ. ದಕ್ಷಿಣ ವಲಯದ ಭಾರತೀಯ ಡೈರಿ ಅಸೋಸಿಯೇ 'ನ್ ಆಶ್ರಯದಲ್ಲಿ, ಆಯೋಜಿತ 'ಮೇವು ಮೇಳ' ಕಾರ್ಯಕ್ರಮವನ್ನು, ಬೀದರ ಪಶು ವಿಶ್ವವಿದ್ಯಾಲಯದ ಉಪ ಕುಲಪತಿ ಕೆ.ಸಿ.ವೀರಣ್ಣ ಬೆಳಗ್ಗೆ 10 ಗಂಟೆಗೆ ಉದ್ಘಾಟಿಸಲಿದ್ದಾರೆ.

<><><>

ವಿಜಯನಗರ ಜಿಲ್ಲೆ, ಹಂಪಿಯ ಪ್ರಮುಖ ಸ್ಮಾರಕಗಳಿಗೆ, ಧ್ವನಿ ಮತ್ತು ಬೆಳಕು ವ್ಯವಸ್ಥೆ ಸೇರಿದಂತೆ, ಮೂಲಸೌಕರ್ಯ ಅಭಿವೃದ್ಧಿಗೆ, 60 ಕೋಟಿ ರೂಪಾಯಿ ಅನುದಾನ ಮಂಜೂರಾಗಿದೆ ಎಂದು, ಶಾಸಕ ಎಚ್.ಆರ್.ಗವಿಯಪ್ಪ ತಿಳಿಸಿದ್ದಾರೆ. ಹಂಪಿ ದೇವಸ್ಥಾನಗಳ ಅಭಿವೃದ್ಧಿ, ಕಮಲಾಪುರ ಪಟ್ಟಣದಲ್ಲಿ ಯಾತ್ರಿ ನಿವಾಸ ನಿರ್ಮಾಣದ ಯೋಜನೆಗಳಿಗೆ, ಈ ಅನುದಾನ ಬಳಕೆಯಾಗಲಿದೆ ಎಂದು, ಅವರು ಹೇಳಿದ್ದಾರೆ.

<><><>

ಚೆನ್ನೈ ನಗರದ ಎಸ್.ಆರ್.ಎಂ. ವಿಶ್ವವಿದ್ಯಾಲಯದಲ್ಲಿ, ನಾಳೆಯಿಂದ 29ನೇ ತಾರೀಖಿನ ವರೆಗೆ ಆಯೋಜಿತ, ದಕ್ಷಿಣ ವಲಯ ಅಂತರ್ ವಿಶ್ವವಿದ್ಯಾಲಯಗಳ, ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ, ಕರ್ನಾಟಕ ವಿಶ್ವವಿದ್ಯಾಲಯದ ಪುರುಷರ ಬ್ಯಾಡ್ಮಿಂಟನ್ ತಂಡ ಭಾಗವಹಿಸಲಿದೆ. ಕರ್ನಾಟಕ ವಿಶ್ವವಿದ್ಯಾಲಯದ ಉಪ ಕುಲಪತಿ ಡಾಕ್ಟರ್ ಬಿ. ಎಮ್. ಪಾಟೀಲ ಅವರು ಶುಭ ಕೋರಿ, ತಂಡವನ್ನು ಬೀಳ್ಕೊಟ್ಟರು.

<><><>

ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 27 ರಂದು ಭಾನುವಾರ ಬೆಳಗ್ಗೆ 11 ಗಂಟೆಗೆ, ದೇಶದ ಜನತೆಯೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ, 115ನೇ ಸಂಚಿಕೆಯಾಗಿದೆ. ಸಾರ್ವಜನಿಕರು ತಮ್ಮ ಅಭಿಪ್ರಾಯಗಳನ್ನು "ನವೋ ಆ್ಯಪ್" ಅಥವಾ "ಮೈ ಜಿಒವಿ.ಇನ್" ಮೂಲಕ, ಇಂದು ರಾತ್ರಿ 11 ಗಂಟೆ 45 ನಿಮಿಷಗಳ ವರೆಗೆ ಹಂಚಿಕೊಳ್ಳಲು ಅವಕಾಶವಿದೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ, ಡಿ.ವೀರೇಂದ್ರ ಹೆಗ್ಗಡೆಯವರ ಪಟ್ಟಾಭಿ ೇಕದ, 57ನೇ ವರ್ಧಂತ್ಯುತ್ಸವ ನಿಮಿತ್ತ, ಶ್ರೀ ಕ್ಷೇತ್ರದಲ್ಲಿ ಅಭಿನಂದನಾ ಕಾರ್ಯಕ್ರಮ ನಡೆಯಿತು.

<><><>

ವಿಶ್ವ ಪೋಲಿಯೋ ಜಾಗ್ರತಿ ದಿನವನ್ನು, ನಿನ್ನೆ ಆಚರಿಸಲಾಯಿತು.

<><><>

ಉಪಲೋಕಾಯುಕ್ತ, ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು, ಇಂದು ಯಲಹಂಕ ಉಪನಗರದ ಅಂಬೇಡ್ಕರ್ ಭವನದಲ್ಲಿ, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ.

<><><>

ವಿಜಯಪುರ ಜಿಲ್ಲೆಯಲ್ಲಿ, ಡೋಣಿ ನದಿಯಿಂದ ಉಂಟಾಗುವ ಪ್ರವಾಹ ನಿಯಂತ್ರಿಸಲು, ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕುರಿತು, ಜಿಲ್ಲಾಧಿಕಾರಿ ಟಿ.ಭೂ ಬಾಲನ್ ಹಾಗೂ ಜಿಲ್ಲಾ ಪಂಚಾಯ್ತಿ ಸಿ.ಇ.ಓ. ರಿಷಿ ಆನಂದ ಪರಿಶೀಲಿಸಿದರು.

<><><>

ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಕರ್ತವ್ಯ ನಿರತ, ಕಾವಾಡಿಗ ಗೋಪಾಲ, ಆನೆ ಪಾಲನಾ ಕೇಂದ್ರದ ಸೀಗೆಕಟ್ಟೆ ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿದ್ದು, ಅರಣ್ಯ ಇಲಾಖೆ ಅವಲಂಬಿತ ಕುಟುಂಬಕ್ಕೆ ಪರಿಹಾರ ಪಾವತಿಸಲಿದೆ.

<><><>

ಕೊಡಗಿನ ಪ್ರವಾಸಿ ತಾಣಗಳ, ಸಮಗ್ರ ಮಾಹಿತಿಯುಳ್ಳ, 'ಕಾಫಿ ಟೇಬಲ್ ಬುಕ್' ಬಿಡುಗಡೆಯಾಗಲಿದೆ ಎಂದು, ಜಿಲ್ಲಾಧಿಕಾರಿ ವೆಂಕಟ್ ರಾಜಾ ತಿಳಿಸಿದ್ದಾರೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಲು ಸಾಧ್ಯವಾಗದ ಬಡವರಿಗೆ, ಆರೋಗ್ಯ ಸೇವೆ ಮನೆ ಬಾಗಿಲಿಗೆ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಬೆಂಗಳೂರಿನ ಪ್ರತಿಷ್ಠಿತ ಮಾಲ್‌ಗಳಲ್ಲಿ, ಆಹಾರ ಪದಾರ್ಥ ಕಲಬೆರಕೆ ಪತ್ತೆಗೆ, ಪರೀಕ್ಷಾ ಕೇಂದ್ರ ಸ್ಥಾಪನೆ – ಆಯುಕ್ತ ಕೆ. ಶ್ರೀನಿವಾಸ.
- ಉಪ ರಾಷ್ಟ್ರಪತಿ ಜಗದೀಪ್ ಧನಕರ್, ಇಂದು ಮತ್ತು ನಾಳೆ ರಾಜ್ಯಕ್ಕೆ ಭೇಟಿ; ಹಲವು ಕಾರ್ಯಕ್ರಮಗಳಲ್ಲಿ ಭಾಗಿ.
- ಇಂದಿನಿಂದ ನವೆಂಬರ್ 2ರ ವರೆಗೆ, ಭಕ್ತರಿಗೆ ಹಾಸನಾಂಬೆ ದರ್ಶನ ಭಾಗ್ಯ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>